## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 87 ಪಬವ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:-24.10.2017.

## ಅಧಿಸೂಚನೆ

ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ)ಗೆ ಸೇರಿದ ಗ್ರೂಪ್-ಎ ವೃಂದದ ಕಾರ್ಯನಿರ್ವಾಹಕ ಅಧಿಕಾರಿ/ಸಹಾಯಕ ಕಾರ್ಯದರ್ಶಿ, ಪಂಚಾಯತ್ ರಾಜ್ ಹುದ್ದೆಗೆ ಆಯ್ಕೆಯಾಗಿದ್ದ ಒಟ್ಟು 60 ಅಭ್ಯರ್ಥಿಗಳಿಗೆ ಷರತ್ತುಬದ್ಧ ನೇಮಕಾತಿಯನ್ನು ದಿನಾಂಕ 03.04.2017ರಂದು ನೀಡಲಾಗಿದ್ದು, ಇದರನ್ವಯ ಒಟ್ಟು 21 ಅಭ್ಯರ್ಥಿಗಳು ಕಾರ್ಯ ವರದಿ ಮಾಡಿಕೊಂಡಿರುತ್ತಾರೆ. ಈ ಪೈಕಿ 21 ಅಭ್ಯರ್ಥಿಗಳಲ್ಲಿ ಶ್ರೀಮತಿ ನಂದಿನಿ ಪಾಟೀಲ್ ಮತ್ತು ಶ್ರೀ ಅಭಿಷೇಕ್ ಹೆಗ್ಡೆ ಇವರಿಬ್ಬರು ಒಳಗೊಂಡಿದ್ದು, 2011ನೇ ಸಾಲಿನ ಗೆಜೆಟೆಡ್ ಪ್ರೋಬೇಷನರ್ಸ್ ಹುದ್ದೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗವು ಆಯ್ಕೆ ಮಾಡಿರುವ ಪ್ರಕ್ರಿಯೆಯನ್ನು ಪ್ರಶ್ನಿಸಿ, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿಯು ಇನ್ನು ಇತ್ಯಾರ್ಥವಾಗದೆ ಬಾಕಿಯಿದ್ದು, ಸದರಿ 21 ಅಭ್ಯರ್ಥಿಗಳಿಗೆ ವೇತನ ಮತ್ತು ಇತ್ಯಾದಿ ಸೇವಾ ಸವಲತ್ತುಗಳನ್ನು ಇಲಾಖೆಯಿಂದ ಇದುವರೆವಿಗೂ ನೀಡಿರುವುದಿಲ್ಲ.

ಈ ಮಾಹಿತಿಯೊಂದಿಗೆ ಶ್ರೀಮತಿ ನಂದಿನಿ ಪಾಟೀಲ್ ಮತ್ತು ಶ್ರೀ ಅಭಿಷೇಕ್ ಹೆಗ್ಡೆ ಇವರುಗಳನ್ನು ದಿನಾಂಕ 11.10.2017ರ ಅಧಿಸೂಚನೆ ಅನ್ವಯ ವಾಣಿಜ್ಯ ತೆರಿಗೆ ಇಲಾಖೆಯ ಸಹಾಯಕ ಆಯುಕ್ತರ ಹುದ್ದೆಗೆ ಆಯ್ಕೆಯಾಗಿರುವುದರಿಂದ ಸದರಿ ಹುದ್ದೆಗೆ ಕಾರ್ಯವರದಿ ಮಾಡಿಕೊಳ್ಳಲು ಅಭ್ಯರ್ಥಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಬಿಡುಗಡೆ ಮಾಡಲು ಕೋರಿರುವಂತೆ ದಿನಾಂಕ 24.10.2017ರ ಅಪರಾಹ್ನ ಬಿಡುಗಡೆಗೊಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

24/10/17

(ಡಿ.ಎಸ್.ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸೇವೆಗಳು-ಬಿ & ಸಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:-

1) ಮಹಾಲೇಖಪಾಲರು, (ಎ ಮತ್ತು ಇ ) ಕರ್ನಾಟಕ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
4) ಆಯುಕ್ತರು, ವಾಣಿಜ್ಯ ಮತ್ತು ತೆರಿಗೆ ಇಲಾಖೆ, ಗಾಂಧಿನಗರ, ಬೆಂಗಳೂರು.

5) ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
6) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7) ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು).
8) ಸಂಬಂಧಿಸಿದ ಅಧಿಕಾರಿಗಳಿಗೆ.

ಪ್ರತಿ ಮಾಹಿತಿಗಾಗಿ:-

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ(ಆಡಳಿತ)ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.